# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆಂಟನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಶುಕ್ರವಾರ, ದಿನಾಂಕ:23ನೇ ಜನವರಿ, 2026**
**(ಸಮಯ: ಬೆಳಗ್ಗೆ:11.00 ಗಂಟೆಗೆ)**

* * *

### 01. ನಿಯಮ 330ಎರ ಮೇರೆಗೆ

### 02. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 03. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ಅ) "2026ನೇ ಜನವರಿ, 22ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು **ಶ್ರೀ ಐವನ್ ಡಿ'ಸೋಜಾ** ಅವರು ಸೂಚಿಸುವುದು;

ಆ) **ಶ್ರೀ ರಮೇಶ್ ಬಾಬು** ಅವರು ಅನುಮೋದಿಸುವುದು.

### 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಶಿವಕುಮಾರ್ ಕೆ.** ಅವರು ಆಸಿಡ್ ದಾಳಿಯಾದ ಸಂತ್ರಸ್ಥೆಯರ ವೈದ್ಯಕೀಯ ಚಿಕಿತ್ಸೆ ಮತ್ತು ಸೌಲಭ್ಯ, ಮಾಸಿಕ ಪರಿಹಾರ ಮತ್ತು ವೇತನ, ವಾಸಸ್ಥಳ, ವಸತಿ ಸೌಲಭ್ಯ, ಸರ್ಕಾರಿ ಉದ್ಯೋಗ ಮತ್ತು ಮೀಸಲಾತಿ ಒದಗಿಸುವ ಕುರಿತು ಹಾಗೂ ಆಸಿಡ್ ಮಾರಾಟದ ಮೇಲೆ ನಿರ್ಬಂಧ ಹೇರುವುದಕ್ಕೆ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

02. **ಶ್ರೀಯುತರುಗಳಾದ ಮಂಜುನಾಥ್ ಭಂಡಾರಿ, ಎಸ್. ರವಿ ಹಾಗೂ ಎಂ.ಎಲ್. ಅನೀಲ್ ಕುಮಾರ್** ಅವರುಗಳು ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿ ನೇಮಕ ಆದೇಶವನ್ನು ಹಿಂಪಡೆದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993ರ ಪ್ರಕರಣ 8(1)ಬಿ (i) ರನ್ವಯ ಈಗಿರುವ ಸದಸ್ಯರನ್ನೊಳಗೊಂಡ ಆಡಳಿತ ಸಮಿತಿಯ ಅವಧಿಯನ್ನು 6 ತಿಂಗಳಿಗೆ ವಿಸ್ತರಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

03. **ಶ್ರೀ ಬಸನಗೌಡ ಬಾದರ್ಲಿ ಅವರು** ಹಟ್ಟಿ ಚಿನ್ನದ ಗಣಿ ಕಂಪನಿಯು ತನ್ನ ಅವೈಜ್ಞಾನಿಕ ಉತ್ಪಾದನೆಯಿಂದಾಗಿ ಡಿಸೆಂಬರ್–2025 ಅಂತ್ಯಕ್ಕೆ ನಿಗದಿತ ಗುರಿಗಿಂತ ಸುಮಾರು 285 ಕೆ.ಜಿ. ಕಡಿಮೆ ಚಿನ್ನವನ್ನು ಹಾಗೂ ಸುಮಾರು 1.31 ಲಕ್ಷ ಟನ್ ಕಡಿಮೆ ಅದಿರನ್ನು ಉತ್ಪಾದಿಸಿರುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

04. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ಕುದುರೆ ಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಬರುವ ಬುಡಕಟ್ಟು ಮತ್ತು ಇತರೆ ಜನಾಂಗದ ಕುಟುಂಬಗಳನ್ನು ಬೇರೆಡೆ ಸ್ಥಳಾಂತರಿಸುವುದರಿಂದ, ಕುಟುಂಬಗಳಿಗೆ ನೀಡುವ ಪರ್ಯಾಯ ಜಮೀನು ಅಥವಾ ಪರಿಹಾರ ಮತ್ತು ಸಾಗುವಳಿ ಮಾಡಿಕೊಂಡು ಬಂದ ಅರಣ್ಯ ಭೂಮಿಗೆ ಪರಿಹಾರ ಒದಗಿಸುವ ಬಗ್ಗೆ ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

05. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಬಾಗಲಕೋಟಿ ಜಿಲ್ಲೆಯ ಜಮಖಂಡಿ ತಾಲ್ಲೂಕಿನಲ್ಲಿ ಕೃಷ್ಣ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಹಿಪ್ಪರಗಿ ಬ್ಯಾರೇಜ್ ಗೇಟ್ ದುರಸ್ಥಿಗೊಳಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

01. **ಶ್ರೀ ರಮೇಶ್ ಬಾಬು** ಅವರು ರಾಜ್ಯದಲ್ಲಿ ಬಹುತೇಕ ಕೈಗಾರಿಕೆಗಳು ಹಾಗೂ ಕಂಪನಿಗಳು ತಮ್ಮ ಲಾಭಾಂಶದಲ್ಲಿ ಕಾರ್ಪೋರೇಟ್ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ನಿಧಿಯನ್ನು ರಾಜ್ಯದ ಮೂಲಭೂತ ಸೌಕರ್ಯಗಳಿಗೆ ನೀಡದೆ ವಂಚಿಸುತ್ತಿರುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು)

02. **ಶ್ರೀಯುತರುಗಳಾದ ಪುಟ್ಟಣ್ಣ, ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.), ಬಸನಗೌಡ ಬಾದರ್ಲಿ, ಬಲ್ಕೀಸ್ ಬಾನು ಹಾಗೂ ರಾಮೋಜಿಗೌಡ** ಅವರುಗಳು ದಿನಾಂಕ:15.10.2022 ರಂದು ಪೊಲೀಸ್ ಇನ್ಸ್‌ಪೆಕ್ಟರ್ (ಐ.ಎಸ್.ಡಿ) ಅವರನ್ನು ಅಮಾನತ್ತುಗೊಳಿಸಿ ಹೊರಡಿಸಲಾದ ಆದೇಶವನ್ನು ತೆರವುಗೊಳಿಸಿ ಸದರಿ ಅಧಿಕಾರಿಯನ್ನು ಸ್ಥಳ ನಿಯುಕ್ತಿಗೊಳಿಸುವಂತೆ ಕರ್ನಾಟಕ ಉಚ್ಛ ನ್ಯಾಯಾಲಯವು ಆದೇಶ ನೀಡಿದ್ದರೂ ಇದುವರೆವಿಗೂ ಕ್ರಮ ವಹಿಸುವುದರ ಬಗ್ಗೆ ಪ್ರಸ್ತಾಪಿಸುವುದು. (ಮಾನ್ಯ ಗೃಹ ಸಚಿವರು)

೦೩. **ಡಾ: ತಳವಾರ್ ಸಾಬಣ್ಣ** ಅವರು ಗಡಿನಾಡು ಮತ್ತು ಹೊರನಾಡು ಕನ್ನಡಿಗರ ಹಿತಾಸಕ್ತಿ ಕಾಪಾಡಲು ಹಾಗೂ ಶಿಕ್ಷಣ ಮತ್ತು ಉದ್ಯೋಗ ಅವಕಾಶ ಒದಗಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು)

೦೪. **ಶ್ರೀ ಕೆ.ಎಸ್. ನವೀನ್** ಅವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ವಿದ್ಯಾರ್ಥಿ ವಸತಿ ನಿಲಯಗಳ ಸಂಖ್ಯೆಯನ್ನು ಹೆಚ್ಚಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**